ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ತುಮಕೂರು ಜಿಲ್ಲೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ವ್ಯಾಪ್ತಿ ಕುರಿತು

ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು)

434 (542) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ವ್ಯಾಪ್ತಿಯಲ್ಲಿ ಎಷ್ಟು ಸರ್ಕಾರಿ ಹಾಗೂ ಅನುದಾನಿತ ಮತ್ತು ಅನುದಾನ ರಹಿತ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿವೆ ; ಸದರಿ ಶಾಲೆಗಳಲ್ಲಿ ಶೌಚಾಲಯ ವ್ಯವಸ್ಥೆ ಇದೆಯೇ ; (ಶಾಲೆಯ ಹೆಸರು ಸಹಿತ ವಿವರವಾದ ಪೂರ್ಣ ಮಾಹಿತಿ ನೀಡುವುದು)

(ಆ) ಚಿಕ್ಕನಾಯಕನಹಳ್ಳಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ವ್ಯಾಪ್ತಿಯಲ್ಲಿ ಎಷ್ಟು ವಿದ್ಯಾರ್ಥಿಗಳು ಬಿಸಿ ಊಟದ ವ್ಯಾಪ್ತಿಗೆ ಬರುತ್ತಾರೆ. ಕಳೆದ 3 ವರ್ಷಗಳಲ್ಲಿ ಬಿಸಿಯೂಟ ಕುರಿತು ಎಷ್ಟು ದೂರುಗಳು ಬಂದಿರುತ್ತವೆ; ದೂರು ಬಂದಲ್ಲಿ, ಇದರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಚಿಕ್ಕನಾಯಕನಹಳ್ಳಿ ತಾಲ್ಲೂಕು ವ್ಯಾಪ್ತಿಯಲ್ಲಿ ಶಾಲಾ ಮಕ್ಕಳಿಗೆ ಪೂರ್ಣ ಪ್ರಮಾಣದ ಸಮವಸ್ತ್ರ ಮತ್ತು ಶೂಗಳನ್ನು ವಿತರಿಸಲಾಗಿದೆಯೇ ; (ಪೂರ್ಣ ವಿವರ ನೀಡುವುದು)

(ಈ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಕ್ಷೇತ್ರ ಶಿಕ್ಷಣಾಧಿಕಾರಿಗಳು ಈಗಾಗಲೇ ಎಲ್ಲೆಲ್ಲಿ ಕಾರ್ಯನಿರ್ವಹಿಸಿರುತ್ತಾರೆ ; ಇವರ ಕರ್ತವ್ಯ ನಿರ್ವಹಣೆಯ ಕುರಿತು ಇಲ್ಲಿಯವರೆಗೆ ಯಾವುದಾದರೂ ದೂರು ದಾಖಲಾಗಿದೆಯೇ ; ದಾಖಲಾಗಿದ್ದಲ್ಲಿ, ಇವರುಗಳ ಮೇಲೆ ಏನು ಕ್ರಮ ಕೈಗೊಳ್ಳಲಾಗಿದೆ ; ಚಿಕ್ಕನಾಯಕನ ಹಳ್ಳಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಕೇಂದ್ರ ಸ್ಥಳದಲ್ಲಿ ವಾಸವಾಗಿದ್ದಾರೆಯೇ ; ಇಲ್ಲದಿದಲ್ಲಿ, ಇವರ ಮೇಲೆ ನಿಯಮಾನುಸಾರ ಕ್ರಮ ಕೈಗೊಳ್ಳಲಾಗಿದೆಯೇ ;

(ಉ) ಚಿಕ್ಕನಾಯಕನಹಳ್ಳಿ ಶೆಟ್ಟಿಕೆರೆ ಹೋಬಳಿಯ ಸೋಮಲಪುರ ಗ್ರಾಮದ ಸರ್ಕಾರಿ ಪ್ರಾಥಮಿಕ ಪಾಠಶಾಲೆಯ ಹಳೆ ಕಟ್ಟಡ ಶಿಥಿಲ ವ್ಯವಸ್ಥೆಯಿಂದ ಕೂಡಿದ್ದು, ಬೀಳುವ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಏನು ಕ್ರಮ ಕೈಗೊಳ್ಳಲಾಗಿದೆ?